# ಜಿಲ್ಲಾ ಪಂಚಾಯಿತಿ, ಹಾಸನ.

ಸಂಖ್ಯೆ: ಜಿಪಂಹಾ/ಪ.ಶಾ/ 55/2010-11

ದಿನಾಂಕ: 18-02-2011

## ಸಭಾಹ್ವಾನ ಪತ್ರ

ದಿನಾಂಕ: **28-02-2011**ರಂದು ಸೋಮವಾರ ಪೂರ್ವಾಹ್ನ:**10-00** ಗಂಟೆಗೆ ಶ್ರೀ ಬಿ.ಡಿ.ಚಂದ್ರೇಗೌಡ, ಅಧ್ಯಕ್ಷರು, ಜಿಲ್ಲಾ ಪಂಚಾಯಿತಿ, ಹಾಸನ ಇವರ ಅಧ್ಯಕ್ಷತೆಯಲ್ಲಿ ಜಿಲ್ಲಾ ಪಂಚಾಯತ್ ಸಾಮಾನ್ಯ ಸಭೆಯನ್ನು ಹೊಯ್ಸಳ ಸಭಾಂಗಣದಲ್ಲಿ ಕರೆಯಲಾಗಿದೆ. ಮಾನ್ಯ ಸದಸ್ಯರುಗಳು ಸಭೆಗೆ ಸಕಾಲದಲ್ಲಿ ಹಾಜರಾಗಲು ಕೋರಿದೆ.

(ಎಸ್.ಟಿ.ಅಂಜನ್ ಕುಮಾರ್),
ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ,
ಜಿಲ್ಲಾ ಪಂಚಾಯಿತಿ, ಹಾಸನ.

ಸಭೆಯಲ್ಲಿ ಚರ್ಚಿಸಬೇಕಾದ ವಿಷಯಗಳು:-

1. ಜಿಲ್ಲಾ ಪಂಚಾಯಿತಿಯ ವಿವಿಧ ಸ್ಥಾಯಿ ಸಮಿತಿಗಳ ರಚನೆ ಬಗ್ಗೆ

**ಅಧ್ಯಕ್ಷರ ಅಪ್ಪಣೆ ಮೇರೆಗೆ ಇತರೆ ವಿಷಯಗಳು**

ಪ್ರತಿಯನ್ನು:

1. ಮಾನ್ಯ ವಸತಿ ಸಚಿವರು ಹಾಗೂ ಹಾಸನ ಜಿಲ್ಲಾ ಉಸ್ತುವಾರಿ ಸಚಿವರ ಆಪ್ತಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ, ಬೆಂಗಳೂರು ಇವರಿಗೆ ಕಳುಹಿಸುತ್ತಾ, ವಿಷಯವನ್ನು ಮಾನ್ಯ ಸಚಿವರ ಗಮನಕ್ಕೆ ತರಲು ಕೋರಿದೆ.
2. ಮಾನ್ಯ ಸರ್ಕಾರದ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು ಇವರಿಗೆ ದಯಾಪರ ಅವಗಾಹನೆಗೆ ಸಲ್ಲಿಸಿದೆ.
3. ಮಾನ್ಯ ಲೋಕಸಭಾ ಸದಸ್ಯರು, ಇವರಿಗೆ ದಯಾಪರ ಅವಗಾಹನೆಗೆ ಸಲ್ಲಿಸಿದೆ.
4. ಹಾಸನ ಜಿಲ್ಲೆಯ ಎಲ್ಲಾ ಮಾನ್ಯ ವಿಧಾನ ಸಭಾ ಮತ್ತು ವಿಧಾನ ಪರಿಷತ್ ಸದಸ್ಯರುಗಳಿಗೆ ಮಾಹಿತಿಗಾಗಿ ಸಲ್ಲಿಸಿದೆ
5. ಹಾಸನ ಜಿಲ್ಲಾ ಪಂಚಾಯತ್, ಮಾನ್ಯ ಅಧ್ಯಕ್ಷರು ಮತ್ತು ಉಪಾಧ್ಯಕ್ಷರ ಆಪ್ತಶಾಖೆಗೆ ಮಾಹಿತಿಗಾಗಿ ಸಲ್ಲಿಸಿದೆ.

6. ಹಾಸನ ಜಿಲ್ಲೆಯ ಎಲ್ಲಾ ಮಾನ್ಯ ಜಿಲ್ಲಾ ಪಂಚಾಯಿತಿ ಸದಸ್ಯರುಗಳಿಗೆ
7. ಹಾಸನ ಜಿಲ್ಲೆಯ ಎಲ್ಲಾ ತಾಲ್ಲೂಕು ಪಂಚಾಯಿತಿ ಅಧ್ಯಕ್ಷರುಗಳಿಗೆ
8. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರ ಆಪ್ತಶಾಖೆ, ಜಿಲ್ಲಾ ಪಂಚಾಯಿತಿ, ಹಾಸನ.
9. ಉಪ ಕಾರ್ಯದರ್ಶಿ( ಆಡಳಿತ), ಜಿಲ್ಲಾ ಪಂಚಾಯಿತಿ, ಹಾಸನ.
10. ಉಪ ಕಾರ್ಯದರ್ಶಿ(ಅಭಿವೃದ್ಧಿ), ಜಿಲ್ಲಾ ಪಂಚಾಯಿತಿ, ಹಾಸನ.
11. ಮುಖ್ಯ ಲೆಕ್ಕಾಧಿಕಾರಿ, ಜಿಲ್ಲಾ ಪಂಚಾಯಿತಿ, ಹಾಸನ.
12. ಮುಖ್ಯ ಯೋಜನಾಧಿಕಾರಿ, ಜಿಲ್ಲಾ ಪಂಚಾಯಿತಿ, ಹಾಸನ.
13. ಜಿಲ್ಲಾ ಪಂಚಾಯಿತಿ ವ್ಯಾಪ್ತಿಯ ಎಲ್ಲಾ ಜಿಲ್ಲಾ ಮಟ್ಟದ ಅಧಿಕಾರಿಗಳಿಗೆ
14. ಕಾರ್ಯಪಾಲಕ ಅಭಿಯಂತರರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಹಾಸನ ಮತ್ತು ಚನ್ನರಾಯಪಟ್ಟಣ
15. ಜಿಲ್ಲೆಯ ಎಲ್ಲಾ ಸಹಾಯಕ ಕಾರ್ಯಪಾಲಕ ಅಭಿಯಂತರರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗಗಳಿಗೆ
16. ಕಛೇರಿ ಪ್ರತಿ.

**ದಿನಾಂಕ: 28-02-2011ರಂದು ಪೂರ್ವಾಹ್ನ:10-00 ಗಂಟೆಗೆ ಹೊಯ್ಸಳ ಸಭಾಂಗಣ, ಜಿಲ್ಲಾ ಪಂಚಾಯತ್, ಹಾಸನ ಇಲ್ಲಿ ನಡೆದ ಜಿಲ್ಲಾ ಪಂಚಾಯತ್ ಸಾಮಾನ್ಯ ಸಭೆಯ ನಡವಳಿಗಳು**

**ಅಧ್ಯಕ್ಷತೆ: ಶ್ರೀ ಬಿ.ಡಿ.ಚಂದ್ರೇಗೌಡ**

**ಅಧ್ಯಕ್ಷರು,**

**ಜಿಲ್ಲಾ ಪಂಚಾಯತ್, ಹಾಸನ.**

ಹಾಜರಿ: 43 | ಗೈರು ಹಾಜರಿ: 15

| ಕ್ರಸಂ | ವಿಷಯ | ಚರ್ಚೆ | ತೀರ್ಮಾನ |
|---|---|---|---|
| | | ಉಪ ಕಾರ್ಯದರ್ಶಿ(ಆಡಳಿತ)ರವರು ಸಭೆಗೆ ಮಾನ್ಯ ಅಧ್ಯಕ್ಷರು, ಮಾನ್ಯ ಉಪಾಧ್ಯಕ್ಷರು, ಮಾನ್ಯ ಜಿಲ್ಲಾ ಪಂಚಾಯಿತಿ ಸದಸ್ಯರು, ತಾಲ್ಲೂಕು ಪಂಚಾಯಿತಿ ಅಧ್ಯಕ್ಷರು, ಜಿಲ್ಲಾ ಮಟ್ಟದ ಅಧಿಕಾರಿಗಳು, ಪತ್ರಿಕಾ ಮಾಧ್ಯಮದವರನ್ನು ಸ್ವಾಗತಿಸುತ್ತಾ, ಅಧ್ಯಕ್ಷತೆ ವಹಿಸಿ ಸಭೆಯನ್ನು ನಡೆಸಿಕೊಡುವಂತೆ ಮಾನ್ಯ ಅಧ್ಯಕ್ಷರನ್ನು ಕೋರಿದರು. | |
| 1 | ಜಿಲ್ಲಾ ಪಂಚಾಯಿತಿಯ ವಿವಿಧ ಸ್ಥಾಯಿ ಸಮಿತಿಗಳನ್ನು ರಚಿಸುವ ಬಗ್ಗೆ. | ಉಪ ಕಾರ್ಯದರ್ಶಿ(ಆಡಳಿತ)ರವರು ಮಾತನಾಡುತ್ತಾ, ಜಿಲ್ಲಾ ಪಂಚಾಯಿತಿಗೆ ಹೊಸದಾಗಿ ಸದಸ್ಯರುಗಳು ಆಯ್ಕೆಯಾಗಿದ್ದು, ಹೊಸದಾಗಿ ಸ್ಥಾಯಿ ಸಮಿತಿಗಳಗಳನ್ನು ರಚನೆ ಮಾಡಿ ಸದಸ್ಯರುಗಳನ್ನು ಆಯ್ಕೆ ಮಾಡಬೇಕಾಗಿರುತ್ತದೆ. ಜಿಲ್ಲಾ ಪಂಚಾಯಿತಿಯಲ್ಲಿ ಒಟ್ಟು 5 ಸ್ಥಾಯಿ ಸಮಿತಿಗಳಿದ್ದು, ಪ್ರತಿ ಸಮಿತಿಗೆ 7 ಜನ ಸದಸ್ಯರನ್ನು ಆಯ್ಕೆ ಮಾಡಬೇಕಾಗಿರುತ್ತದೆ. ಇವುಗಳಲ್ಲಿ ಹಣಕಾಸು, ಲೆಕ್ಕಪರಿಶೋಧನೆ ಮತ್ತು ಯೋಜನಾ ಸ್ಥಾಯಿ ಸಮಿತಿಗೆ ಅಧ್ಯಕ್ಷರೇ ಅಧ್ಯಕ್ಷರಾಗಿರುತ್ತಾರೆ, ಸಾಮಾನ್ಯ ಸ್ಥಾಯಿ ಸಮಿತಿಗೆ ಉಪಾಧ್ಯಕ್ಷರೇ ಅಧ್ಯಕ್ಷರಾಗಿರುತ್ತಾರೆ, ಉಳಿದ ಮೂರು ಸ್ಥಾಯಿ ಸಮಿತಿಗಳಿಗೆ ಆಯ್ಕೆಯಾಗುವ ಸದಸ್ಯರುಗಳಲ್ಲಿ ಒಬ್ಬರನ್ನು ಅಧ್ಯಕ್ಷರನ್ನಾಗಿ ಆಯ್ಕೆ ಮಾಡಬೇಕಾಗಿರುತ್ತದೆ ಎಂದು ಸಭೆಗೆ ವಿವರ ನೀಡಿದರು.<br>ಮಾನ್ಯ ಸದಸ್ಯರಾದ ಶ್ರೀ ವಿ.ಎ. ನಂಜುಂಡಸ್ವಾಮಿರವರು ವಿವಿಧ ಸ್ಥಾಯಿ ಸಮಿತಿಗಳಿಗೆ ಸದಸ್ಯರುಗಳನ್ನು ಆಯ್ಕೆ ಮಾಡುವ ಅಧಿಕಾರವನ್ನು ಮಾನ್ಯ ಜಿಲ್ಲಾ ಪಂಚಾಯಿತಿ ಅಧ್ಯಕ್ಷರಿಗೆ ನೀಡುವ ಬಗ್ಗೆ ಪ್ರಸ್ತಾವನೆಯನ್ನು ಸಭೆಯಲ್ಲಿ ಮಂಡಿಸಿದರು.<br>ಮಾನ್ಯ ಸದಸ್ಯರಾದ ಶ್ರೀಮತಿ ಜಿ.ಟಿ.ಇಂದಿರಾಧರ್ಮಪ್ಪ ರವರು ಅನುಮೋದಿಸಿದರು.<br>ಮಾನ್ಯ ಸದಸ್ಯರಾದ ಶ್ರೀಮತಿ ಈಶ್ವರಹಳ್ಳಿ ಲಕ್ಷ್ಮಣ್ ರವರು ಮಾತನಾಡುತ್ತಾ, ವಿವಿಧ ಸ್ಥಾಯಿ ಸಮಿತಿಗಳಿಗೆ ಸದಸ್ಯರುಗಳನ್ನು ಆಯ್ಕೆ ಮಾಡುವ ಸಂದರ್ಭದಲ್ಲಿ ಭಾರತೀಯ ಜನತಾ ಪಕ್ಷದ ಸದಸ್ಯರುಗಳಿಗೂ ಸಹ ಅವಕಾಶ ಮಾಡಿಕೊಡಬೇಕೆಂದು ಕೋರಿದರು.<br>ಮಾನ್ಯ ವಿಧಾನ ಸಭಾ ಸದಸ್ಯರಾದ ಶ್ರೀ ಹೆಚ್.ಡಿ.ರೇವಣ್ಣರವರು ಮಾತನಾಡುತ್ತಾ, ಅಗತ್ಯವಿದ್ದಲ್ಲಿ ಚುನಾವಣೆಯನ್ನು ನಡೆಸಿ ವಿವಿಧ ಸ್ಥಾಯಿ ಸಮಿತಿಗಳಿಗೆ ಸದಸ್ಯರನ್ನು ಆಯ್ಕೆ ಮಾಡಲು ಕ್ರಮ ವಹಿಸಬೇಕೆಂದು ತಿಳಿಸಿದರು. | ಸಭೆಯಲ್ಲಿ ಚರ್ಚಿಸಿದಂತೆ, ಹಾಸನ ಜಿಲ್ಲಾ ಪಂಚಾಯಿತಿಯ ವಿವಿಧ ಸ್ಥಾಯಿ ಸಮಿತಿಗಳಿಗೆ ಸದಸ್ಯರುಗಳನ್ನು ಆಯ್ಕೆ ಮಾಡುವ ಬಗ್ಗೆ ಪೂರ್ಣ ಅಧಿಕಾರವನ್ನು ಮಾನ್ಯ ಜಿಲ್ಲಾ ಪಂಚಾಯಿತಿ ಅಧ್ಯಕ್ಷರಿಗೆ ನೀಡಲು ಸ್ಥಾಯಿ ಸಮಿತಿ ಚುನಾವಣಾ ನಿರ್ವಚನಾಧಿಕಾರಿಯನ್ನಾಗಿ ಶ್ರೀ ಹೆಚ್.ವಿ. ನಾಗರಾಜ, ಯೋಜನಾ ಅಂದಾಜು ಮತ್ತು ಮೌಲ್ಯಮಾಪನ ಅಧಿಕಾರಿ, ಜಿಲ್ಲಾ ಪಂಚಾಯಿತಿ, ಹಾಸನ ಇವರನ್ನು ನೇಮಿಸಲು ಸಭೆಯು ಸರ್ವಾನುಮತದಿಂದ ಅನುಮೋದನೆ ನೀಡಿತು. |

| | | | |
|---|---|---|---|
| | | ಮಾನ್ಯ ಸದಸ್ಯರಾದ ಶ್ರೀಮತಿ ಕುಸುಮ ಬಾಲಕೃಷ್ಣರವರು ಮಾತನಾಡುತ್ತಾ, ಹಿಂದಿನಿಂದಲೂ ನಡೆದುಬಂದಿರುವಂತೆ ವಿವಿಧ ಸ್ಥಾಯಿ ಸಮಿತಿಗಳಿಗೆ ಸದಸ್ಯರುಗಳನ್ನು ಆಯ್ಕೆ ಮಾಡುವ ಬಗ್ಗೆ ಪೂರ್ಣ ಅಧಿಕಾರವನ್ನು ಮಾನ್ಯ ಅಧ್ಯಕ್ಷರಿಗೇ ನೀಡಬೇಕೆಂದು ಕೋರಿದರು.<br>ಮಾನ್ಯ ಸದಸ್ಯರಾದ ಶ್ರೀಮತಿ ಜ್ಯೋತಿ ಗುರುದೇವ ರವರು ಮಾತನಾಡುತ್ತಾ, ವಿವಿಧ ಸ್ಥಾಯಿ ಸಮಿತಿಗಳಿಗೆ ಸದಸ್ಯರುಗಳನ್ನು ಆಯ್ಕೆ ಮಾಡುವ ಅಧಿಕಾರವನ್ನು ಮಾನ್ಯ ಜಿಲ್ಲಾ ಪಂಚಾಯಿತಿ ಅಧ್ಯಕ್ಷರಿಗೇ ವಹಿಸಲಿ. ಆದರೆ, ಭಾರತೀಯ ಜನತಾ ಪಕ್ಷದ ಸದಸ್ಯರುಗಳನ್ನು ವಿಶ್ವಾಸಕ್ಕೆ ತೆಗೆದುಕೊಂಡು ಅವರಿಗೂ ಸಹ ಅವಕಾಶ ಮಾಡಿಕೊಡಬೇಕೆಂದು ಕೋರಿದರು.<br>ಮಾನ್ಯ ವಿಧಾನ ಸಭಾ ಸದಸ್ಯರಾದ ಶ್ರೀ ಹೆಚ್.ಡಿ.ರೇವಣ್ಣರವರು ಮಾತನಾಡುತ್ತಾ, ಮುಂದಿನ 15 ದಿನಗಳ ಒಳಗಾಗಿ ಜಿಲ್ಲಾ ಪಂಚಾಯಿತಿ ಸಭೆಯನ್ನು ಕರೆದು, ಸದರಿ ಸಭೆಯಲ್ಲಿ ಹಾಸನ ಜಿಲ್ಲೆಯಲ್ಲಿರುವ ಕುಡಿಯುವ ನೀರಿನ ಸಮಸ್ಯೆ ಮತ್ತು ಇತರೆ ಯೋಜನೆಗಳ ಬಗ್ಗೆ ಚರ್ಚಿಸಿ ಸರ್ಕಾರಕ್ಕೆ ಸೂಕ್ತ ಪ್ರಸ್ತಾವನೆಯನ್ನು ಸಲ್ಲಿಸಲು ಕ್ರಮ ವಹಿಸಬೇಕೆಂದು ತಿಳಿಸಿದರು.<br>ಅದರಂತೆ, ಹಾಸನ ಜಿಲ್ಲಾ ಪಂಚಾಯಿತಿಯ ವಿವಿಧ ಸ್ಥಾಯಿ ಸಮಿತಿಗಳಿಗೆ ಸದಸ್ಯರುಗಳನ್ನು ಆಯ್ಕೆ ಮಾಡುವ ಬಗ್ಗೆ ಪೂರ್ಣ ಅಧಿಕಾರವನ್ನು ಮಾನ್ಯ ಜಿಲ್ಲಾ ಪಂಚಾಯಿತಿ ಅಧ್ಯಕ್ಷರಿಗೆ ನೀಡಲು ಮತ್ತು ಸ್ಥಾಯಿ ಸಮಿತಿ ಚುನಾವಣಾ ನಿರ್ವಚನಾಧಿಕಾರಿಯನ್ನಾಗಿ ಶ್ರೀ ಹೆಚ್.ವಿ. ನಾಗರಾಜ, ಯೋಜನಾ ಅಂದಾಜು ಮತ್ತು ಮೌಲ್ಯಮಾಪನ ಅಧಿಕಾರಿ, ಜಿಲ್ಲಾ ಪಂಚಾಯಿತಿ, ಹಾಸನ ಇವರನ್ನು ನೇಮಿಸಲು ಸಭೆಯು ಒಪ್ಪಿಗೆ ನೀಡಿತು. | |
| | | ಯಾವುದೇ ಹೆಚ್ಚಿನ ವಿಷಯವಿಲ್ಲದುದರಿಂದ, ವಂದನೆಗಳೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು | |

Chandregowda 7/3/11
(ಬಿ.ಡಿ.ಚಂದ್ರೇಗೌಡ)
ಅಧ್ಯಕ್ಷರು,
ಜಿಲ್ಲಾ ಪಂಚಾಯತ್, ಹಾಸನ.